# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **89**
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : **05.07.2023**
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರಾವಳಿ ಭಾಗದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅನಾಧಿಕಾಲದಿಂದ ಅನುಭವಿಸಿಕೊಂಡು ಬರುತ್ತಿದ್ದ ಕಾನೆ, ಬಾನೆ, ಕುಮ್ಕಿ ಹೊಂದಿರುವ ಖದೀಮ್ ವರ್ಗದಾರರಿಗೆ, ಕುಮ್ಕಿಯನ್ನು ಸಕ್ರಮೀಕರಣಗೊಳಿಸಿ ಆದೇಶ ಜಾರಿಗೊಳಿಸಲಾಗಿದೆಯೇ; | ಕರ್ನಾಟಕ ಭೂ ಕಂದಾಯ ಅಧಿನಿಯ, 1964ರ ಕಲಂ 79(2)ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕುಮ್ಕಿ ಭೂಮಿಗಳು, ಬಾಣೆ ಭೂಮಿಗಳು ಮತ್ತು ಕಾಣೆ ಭೂಮಿಗಳು, ಉತ್ತರ ಕನ್ನಡ ಜಿಲ್ಲೆಯಲ್ಲಿನ ಬೆಟ್ಟ ಭೂಮಿಗಳು ಮತ್ತು ಹಾಡಿ ಭೂಮಿಗಳು, ಮೈಸೂರು ಪ್ರದೇಶದಲ್ಲಿನ ಕಾನು ಮತ್ತು ಸೊಪ್ಪಿನ ಬೆಟ್ಟ ಭೂಮಿಗಳು, ಕೊಡಗಿನ ಜಮ್ಮಾ ಮತ್ತು ಬಾಣೆ ಭೂಮಿಗಳು ಮತ್ತು ಹೈದರಬಾದ್ ಪ್ರದೇಶದಲ್ಲಿನ (ಮೋಟಸ್ಥಲ್ ತರಿ ಭೂಮಿಗಳು) (Motasthal wet lands) ಇವುಗಳ ಬಗೆಗಿನ ವಿಶೇಷಾಧಿಕಾರಗಳು ಮುಂದುವರಿಯತಕ್ಕದ್ದು ಎಂದು ತಿಳಿಸಲಾಗಿದೆ. ಕುಮ್ಕಿ ಜಮೀನನು ಸಕ್ರಮೀಕರಣಗೊಳಿಸಲು ಯಾವುದೇ ಆದೇಶ ಹೊರಡಿಸಿರುವುದಿಲ್ಲ. |
| ಆ) | ಈ ಬಗ್ಗೆ ಕಂದಾಯ ಇಲಾಖೆ ಸೂಕ್ತ ನಿಯಮಾವಳಿಗಳನ್ನು ರೂಪಿಸಿ, ಆ ಮೂಲಕ ಖದೀಮ್ ವರ್ಗದಾರರಿಗೆ ಅನುಕೂಲ ಕಲ್ಪಿಸಿದೆಯೇ; | ಸರ್ಕಾರದ ಹಂತದಲ್ಲಿ ಇದರ ಸಾಧಕ ಭಾಧಕ ಚರ್ಚೆಯಲ್ಲಿದೆ. |
| ಇ) | ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ಎಷ್ಟು ಭೂಮಿ ವರ್ಗಾವಣೆಯಾಗಬೇಕಾಗಿತ್ತು ಮತ್ತು ಸದರಿ ಭೂಮಿ ಈಗಾಗಲೇ ಕಂದಾಯ ಇಲಾಖೆ ಸುಪರ್ದಿಗೆ ಬಂದಿದೆಯೇ; | ಮಂಗಳೂರು ವೃತ್ತದಲ್ಲಿ ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ವರ್ಗಾಯಿಸುವಂತಹ ಅರಣ್ಯ ಭೂಮಿ ಇರುವುದಿಲ್ಲ. |
| ಈ) | ಬಂದಿರದಿದ್ದಲ್ಲಿ, ಸದರಿ ಭೂಮಿ ವರ್ಗಾವಣೆ ಪ್ರಕಿಯೆ ಯಾವ ಹಂತದಲ್ಲಿದೆ? | ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಆರ್‌ಡಿ 60 ಎಲ್‌ಜಿಕ್ಯೂ 2023

(ಕೃಷ್ಣ ಭೈರೇಗೌಡ)
ಕಂದಾಯ ಸಚಿವರು